ಇ) ಹಾಗಿದ್ದಲ್ಲಿ, ಈ ನಿಯಮ ಯಾವಾಗ ಜಾರಿಗೆ ಬಂದಿದೆ;

ಈ) 20 ವರ್ಷ ಕಳೆದಿದ್ದರೂ ಸುಸ್ಥಿತಿಯಲ್ಲಿರುವ ವಾಹನಗಳಿಗೆ ವಿನಾಯಿತಿ ನೀಡಲಾಗುವುದೇ:

ಶ್ರೀ ಮಲ್ಲಿಕಾರ್ಜುನ ಖರ್ಗೆ, ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು.

ಅ) 45, 254.

ಆ) ಈ ಬಗ್ಗೆ ಕೇಂದ್ರ ಸರ್ಕಾರವು ಕ್ರಮ ಕೈಗೊಳ್ಳಬೇಕಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

5718. (5821) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು. (ಶಿವಾಜಿ ನಗರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿರುವ ಸರ್ಕಾರಿ ಸ್ವಾಮ್ಯದ ನಿಗಮ ಮಂಡಳಿಗಳ ಸಂಖ್ಯೆ ಎಷ್ಟು;

ಆ) ಇವುಗಳ ಪೈಕಿ, ಇಲ್ಲಿಯವರೆಗೆ ಎಷ್ಟು ನಿಗಮ ಮಂಡಳಿಗಳು ರೋಗಗ್ರಸ್ತವಾಗಿವೆ ಸೇರಲ್ಪಟ್ಟಿವೆ;

ಇ) ಕಳೆದ ಒಂದು ವರ್ಷದಿಂದ ಇವುಗಳ ಪುನಶ್ಚೇತನಕ್ಕೆ ಕೈಗೊಂಡ ಕ್ರಮಗಳೇನು ಹಾಗೂ ಖರ್ಚು ಮಾಡಿದ ಹಣವೆಷ್ಟು;

ಈ) ಈ ಎಲ್ಲಾ ಸರ್ಕಾರಿ ಸ್ವಾಮ್ಯದ ನಿಗಮ ಮಂಡಳಿಗಳ ಕಾರ್ಯ ವೈಖರಿ ಬಗ್ಗೆ ಸ್ಪಷ್ಟ ಚಿತ್ರಣ ನೀಡಲು ಶ್ವೇತಪತ್ರವನ್ನು ಸರ್ಕಾರ ಹೊರಡಿಸುತ್ತದೆಯೇ:

ಶ್ರೀ ಧರ್ಮಸಿಂಗ್, ಮಾನ್ಯ ಮುಖ್ಯಮಂತ್ರಿಗಳು

ಅ) 31–03–2004 ರ ಅಂತ್ಯಕ್ಕೆ ರಾಜ್ಯದಲ್ಲಿ ಒಟ್ಟು 92 ಸರ್ಕಾರಿ ಸ್ವಾಮ್ಯದ ನಿಗಮ ಮಂಡಳಿಗಳು ಇವೆ.

ಆ) ಇವುಗಳ ಪೈಕಿ, 24ಸರ್ಕಾರಿ ಸ್ವಾಮ್ಯದ ನಿಗಮ. ಮಂಡಳಿಗಳು ರೋಗಗ್ರಸ್ತ ಪಟ್ಟಿಗೆ ಸೇರಿವೆ.

ಇ) ಸರ್ಕಾರವು ನಿಯೋಜಿಸಿರುವ ಸಚಿವ ಸಂಪುಟ ಉಪ ಸಮಿತಿಯು ಪುನಶ್ಚೇತನಕ್ಕಿರುವ ಉದ್ದಿಮೆಗಳನ್ನು ಪ್ರತ್ಯೇಕ ಪ್ರತ್ಯೇಕವಾಗಿ ಪರಿಗಣಿಸಿ, ಸಚಿವ ಸಂಪುಟದ ಮುಂದೆ ತಂದು ಕ್ರಮ ಕೈಗೊಳ್ಳುತ್ತಿದೆ. ಇದುವರೆವಿಗೆ ಪುನಶ್ಚೇತನಕ್ಕೆ ಹಣ ಮೆಚ್ಚ ಮಾಡಿರುವುದಿಲ್ಲ.

ಈ) ಇಲ್ಲ.

5719, (6517) ಶ್ರೀ ಕಿರಣ್ ಕುಮಾರ್ ಕೆ. ಎಸ್. (ಕಳ್ಳಂಬೆಳ್ಳ) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ತುಮಕೂರು ಜಿಲ್ಲೆ, ಕಳ್ಳಂಬೆಳ್ಳ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಚಿಕ್ಕನಾಯಕನಹಳ್ಳಿ ತಾಲ್ಲೂಕು, ಹುಳಿಯಾರು ಹೋಬಳಿ, ಯಳನಡು ಗ್ರಾಮದ ಮುಂದಿನ ಕೆರೆ ಕಾಮಗಾರಿ ಪ್ರಗತಿಯಲ್ಲಿದೆಯೇ:

ಆ) ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ ಪ್ರಗತಿ ಯಾವ ಹಂತದಲ್ಲಿದೆ; ಕಾಮಗಾರಿ ವಿವರ ನೀಡುವುದು;

ಇ) ಯಾವ ಯಾವ ಯೋಜನೆಗಳಡಿಯಲ್ಲಿ ಎಷ್ಟೆಷ್ಟು ಹಣವನ್ನು ಈ ಕೆರೆ ಕಾಮಗಾರಿಗೆ ಬಳಸಿಕೊಳ್ಳಲಾಗಿದೆ; (ಪೂರ್ಣ ವಿವರ ನೀಡುವುದು);